# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1540 (1747) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಗೋವಿಂದರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 23.03.2026 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಎಷ್ಟು ಸಿಬ್ಬಂದಿಗಳು/ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಹಾಗೂ ಎಷ್ಟು ಉದ್ಯೋಗಗಳು ಖಾಲಿ ಇವೆ; | ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ವಿವರಗಳು ಈ ಕೆಳಕಂಡಂತಿದೆ.<br><br>\| \| ಕರ್ತವ್ಯ ನಿರ್ವಹಿಸುತ್ತಿರುವ ಉದ್ಯೋಗಿಗಳ ಸಂ: \| ಖಾಲಿ ಇರುವ ಉದ್ಯೋಗಿಗಳ ಸಂ: \|<br>\| ಅಧಿಕಾರಿಗಳು \| 51 \| 36 \|<br>\| ಸಿಬ್ಬಂದಿಗಳು \| 687 \| 708 \| |
| ಆ) | ಖಾಲಿ ಇರುವಂತ ಎಲ್ಲಾ ವೃಂದದ ಹುದ್ದೆಗಳಿಗೆ ಸರ್ಕಾರದಿಂದ ಮತ್ತು ಆರ್ಥಿಕ ಇಲಾಖೆಯಿಂದ ಅನುಮತಿ ದೊರೆತಿದೆಯೇ; | ಗ್ರೂಪ್ "ಡಿ" ಹೊರತುಪಡಿಸಿ, ಗ್ರೂಪ್ "ಬಿ " ಮತ್ತು "ಸಿ" ವೃಂದದಲ್ಲಿ ನೇರ ನೇಮಕಾತಿಯಡಿ ಖಾಲಿ ಇರುವ 211 ಹುದ್ದೆಗಳನ್ನು ಭರ್ತಿ ಮಾಡುವ ಕುರಿತಾದ ಪ್ರಸ್ತಾವನೆಗೆ ಸಂಬಂಧಪಟ್ಟಂತೆ ಕೆಲವು ಅಂಶಗಳಿಗೆ ಮಾಹಿತಿ ಕೋರಿ ಆಯುಕ್ತರಿಗೆ ಪತ್ರ ಬರೆಯಲಾಗಿದೆ. |
| ಇ) | ಮುಖ್ಯ ಗ್ರಂಥಾಲಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಸಂಬಂಧವಾಗಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಕಳುಹಿಸಿಕೊಡಲಾಗಿತ್ತೇ, ಹಾಗಿದ್ದರೆ ಈ ಹುದ್ದೆಗಳ ನೇಮಕಾತಿಗಳ ಪ್ರಕ್ರಿಯೆ ಯಾವ ಹಂತದಲ್ಲಿದೆ ಹಾಗೂ ಕ್ರಮಬದ್ಧವಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತೆ; | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2025, ದಿನಾಂಕ 03.09.2025ರನ್ವಯ 18 ಮುಖ್ಯ ಗ್ರಂಥಾಲಯಾಧಿಕಾರಿ ಹುದ್ದೆಗೆ ರೋಸ್ಟರ್ ಬಿಂದುವನ್ನು ಅಳವಡಿಸಿ, ಆನ್‌ಲೈನ್ ಮೂಲಕ ಕೆ.ಪಿ.ಎಸ್.ಸಿ ಗೆ ಪ್ರಸ್ತಾವನೆ ಸಲ್ಲಿಸಲು ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಕೆಯಾಗಿದ್ದ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |

..2

| | | |
|---|---|---|
| ಈ) | ಗ್ರಂಥಪಾಲಕರ ಹುದ್ದೆಯಿಂದ ಮುಖ್ಯ ಗ್ರಂಥಾಲಯಾಧಿಕಾರಿ ಹುದ್ದೆಗೆ ಮುಂಬಡ್ತಿ ನೀಡಬೇಕಾದ ಸಂದರ್ಭದಲ್ಲಿ ಯಾವ ಮಾನದಂಡವನ್ನು ಅನುಸರಿಸಲಾಗುತ್ತದೆ; ಹಾಗೂ ನಿಯಮವನ್ನು ಉಲ್ಲಂಘಿಸಿ ಮುಖ್ಯ ಗ್ರಂಥಾಲಯಾಧಿಕಾರಿ ಹುದ್ದೆಗೆ ಮುಂಬಡ್ತಿ ನೀಡಲಾಗಿದೆಯೇ? | ಗ್ರಂಥಪಾಲಕರ ಹುದ್ದೆಯಿಂದ ಮುಖ್ಯ ಗ್ರಂಥಾಲಯಾಧಿಕಾರಿ ಹುದ್ದೆಗೆ ಮುಂಬಡ್ತಿ ನೀಡುವ ಸಂದರ್ಭದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಅಸ್ತಿತ್ವದಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗಧಿಪಡಿಸಲಾದ ವಿದ್ಯಾರ್ಹತೆ, ಸೇವಾ ಅರ್ಹತೆ ಹಾಗೂ ಸರ್ಕಾರದಿಂದ ಹೊರಡಿಸಲಾಗುವ ಮುಂಬಡ್ತಿ ಆದೇಶಗಳನ್ನು ಅನುಸರಿಸಲಾಗುತ್ತದೆ.<br><br>ಯಾವುದೇ ನಿಯಮವನ್ನು ಉಲ್ಲಂಘಿಸಿ ಮುಖ್ಯ ಗ್ರಂಥಾಲಯಾಧಿಕಾರಿ ಹುದ್ದೆಗೆ ಮುಂಬಡ್ತಿ ನೀಡಲಾಗಿರುವುದಿಲ್ಲ. |

**ಸಂಖ್ಯೆ:ಇಪಿ 36 ಎಲ್ಐಬಿ 2026**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು